**ವಿಧಿ ವಿಜ್ಞಾನ ಪ್ರಯೋಗಾಲಯದ ಸ್ಥಳ ಪರಿಶೀಲನಾ ಅಧಿಕಾರಿಗಳ ಹುದ್ದೆಗಳಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಪ್ರಶ್ನಿಸಬಹುದಾದಂತಹ ಪ್ರಶ್ನೆಗಳು**

**1. ನಿಗಧಿಪಡಿಸಲಾಗಿರುವ ಕನಿಷ್ಟ ವಯೋಮಿತಿ ?**

ಉ: ಕರ್ನಾಟಕ ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯ, ಮಡಿವಾಳ, ಬೆಂಗಳೂರು ಮತ್ತು ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯಗಳಲ್ಲಿ ಖಾಲಿ ಇರುವ ಸ್ಥಳೀಯ ಮತ್ತು ಮಿಕ್ಕುಳಿದ ವೃಂದದ **ಅಪರಾಧ ಸ್ಥಳ ಪರಿಶೀಲನಾ ಅಧಿಕಾರಿ (ಸೀನ್ ಆಫ್ ಕ್ರೈಂ ಆಫೀಸರ್) (SOCO)** ಹುದ್ದೆಗಳಿಗೆ ನೇಮಕಾತಿ ಮಾಡಲು ಕರ್ನಾಟಕ ರಾಜ್ಯ (ನ್ಯಾಯ ವಿಜ್ಞಾನ ಪ್ರಯೋಗಾಲಯ ಸೇವೆಗಳು) (ನೇಮಕಾತಿ) ನಿಯಮ, 2017, ಕರ್ನಾಟಕ ರಾಜ್ಯ (ವಿಧಿ ವಿಜ್ಞಾನ ಪ್ರಯೋಗಾಲಯ ಸೇವೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2021, ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013, ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು, 2013, ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 3 ಹೈಕಕೋ 2018, ದಿನಾಂಕ:06.06.2020, ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) (ತಿದ್ದುಪಡಿ) ನಿಯಮಗಳು, 2021 ಹಾಗೂ ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಹುದ್ದೆಗೆ ವಯೋಮಿತಿಯು ಅರ್ಜಿಯನ್ನು ಆನ್‌ಲೈನ್ ಮೂಲಕ ಸ್ವೀಕರಿಸಲು ನಿಗಧಿಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ 15.01.2022 ಕ್ಕೆ ಕನಿಷ್ಟ 21 ವರ್ಷ ತುಂಬಿರಬೇಕು. (ಅಧಿಸೂಚನೆ ಕ್ರಮ ಸಂಖ್ಯೆ 5ನ್ನು ನೋಡುವುದು).

**2. ನಿಗಧಿಪಡಿಸಲಾಗಿರುವ ಗರಿಷ್ಠ ವಯೋಮಿತಿ ?**

ಉ: ಕರ್ನಾಟಕ ರಾಜ್ಯ (ನ್ಯಾಯ ವಿಜ್ಞಾನ ಪ್ರಯೋಗಾಲಯ ಸೇವೆಗಳು) (ನೇಮಕಾತಿ) ನಿಯಮ, 2001 ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳ 1977ರ ಸ್ಥಳ ಪರಿಶೀಲನಾ ಅಧಿಕಾರಿಗಳ ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ –ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013, ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ –ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು, 2013, ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳ 1977 ಹುದ್ದೆಗೆ ಗರಿಷ್ಠ ವಯೋಮಿತಿಯು ಅರ್ಜಿಯನ್ನು ಆನ್‌ಲೈನ್ ಮೂಲಕ ಸ್ವೀಕರಿಸಲು ನಿಗಧಿಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ 15.01.2022 ಕ್ಕೆ ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 35 ವರ್ಷ, ಪ್ರವರ್ಗ–2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 38 ವರ್ಷ ಹಾಗೂ ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ / ಪ್ರವರ್ಗ–01 ಗೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 40 ವರ್ಷ ಮೀರಿರಬಾರದು.

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| (ಎ) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |

| | | |
|---|---|---|
| | ಹೊಂದಿದ ಅಭ್ಯರ್ಥಿಗಳಿಗೆ | |
| (ಬಿ) | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |

| | | |
|---|---|---|
| (ಸಿ) | National Cadet Corps ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಡಿ) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಇ) | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| (ಎಫ್) | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳೂ ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಜಿ) | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟು ಕೊಂಡು ಇಲಾಖೆಯು ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | 10 ವರ್ಷಗಳು |
| (ಹೆಚ್) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡು ಇಲಾಖೆಯು ಸೂಚಿಸಿದಾಗ ಅದರ ಮೂಲಕ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | 10 ವರ್ಷಗಳು |

**೩. ಮಾಜಿ ಸೈನಿಕರಿಗೆ ನಿಗಧಿಪಡಿಸಲಾಗಿರುವ ವಯೋಮಿತಿ ?**

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಸೇನೆಯಲ್ಲಿ ಸೇವೆ ಸಲ್ಲಿಸಿದ ಅವಧಿಯ ಜೊತೆಗೆ ಹೆಚ್ಚುವರಿ ಮೂರು (೩) ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು.

**4. ವಿದ್ಯಾರ್ಹತೆ ?**

ಉ: <u>ವಿದ್ಯಾರ್ಹತೆ ಈ ಕೆಳಕಂಡಂತೆ ಇರುತ್ತದೆ.</u>

ಕಾನೂನಿನ ರೀತ್ಯಾ ಸ್ಥಾಪಿತವಾದ ವಿಶ್ವವಿದ್ಯಾನಿಲಯದಿಂದ ವಿಧಿ ವಿಜ್ಞಾನ ವಿಷಯದಲ್ಲಿ ಕನಿಷ್ಠ ಶೇಕಡ 55 ರಷ್ಟು ಅಂಕಗಳೊಂದಿಗೆ ಪದವಿಯನ್ನು ಹೊಂದಿರತಕ್ಕದ್ದು.

**ಅಥವಾ**

ಕಾನೂನಿನ ರೀತ್ಯಾ ಸ್ಥಾಪಿತವಾದ ವಿಶ್ವವಿದ್ಯಾನಿಲಯದಿಂದ ವಿಜ್ಞಾನ ವಿಷಯದಲ್ಲಿ ಕನಿಷ್ಠ ಶೇಕಡ 55 ರಷ್ಟು ಅಂಕಗಳೊಂದಿಗೆ ಪದವಿಯನ್ನು ಹೊಂದಿರತಕ್ಕದ್ದು ಹಾಗೂ ಜೊತೆಗೆ ಮಾನ್ಯತೆ ಪಡೆದ ಸಂಸ್ಥೆಯಿಂದ ವಿಧಿ ವಿಜ್ಞಾನ ವಿಷಯದಲ್ಲಿ ಕನಿಷ್ಟ ಶೇಕಡ 55 ರಷ್ಟು ಅಂಕಗಳೊಂದಿಗೆ 01 ವರ್ಷ ಡಿಪ್ಲೋಮಾವನ್ನು ಹೊಂದಿರತಕ್ಕದ್ದು.

**ಅಥವಾ**

ಕಾನೂನಿನ ರೀತ್ಯಾ ಸ್ಥಾಪತವಾದ ವಿಶ್ವವಿದ್ಯಾನಿಲಯದಿಂದ ವಿಜ್ಞಾನ ವಿಷಯದಲ್ಲಿ ಕನಿಷ್ಠ ಶೇಕಡ 55 ರಷ್ಟು ಅಂಕಗಳೊಂದಿಗೆ ಪದವಿಯನ್ನು ಹೊಂದಿರತಕ್ಕದ್ದು ಜೊತೆಗೆ ವಿಧಿ ವಿಜ್ಞಾನ ವಿಷಯದಲ್ಲಿ ಶೇಕಡ 55 ರಷ್ಟು ಅಂಕಗಳೊಂದಿಗೆ ಸ್ನಾತಕೋತ್ತರ ಪದವಿಯನ್ನು ಹೊಂದಿರತಕ್ಕದ್ದು.

**ಸೂಚನೆ: ಕೆಲವು ಅಭ್ಯರ್ಥಿಗಳ ಅಂಕಪಟ್ಟಿಗಳಲ್ಲಿ ಗ್ರೇಡ್ ಸಿಸ್ಟಮ್, ಸಿ.ಜಿ.ಪಿ.ಎ ಮಾದರಿಯನ್ನು ನಮೂದಿಸಲಾಗಿರುತ್ತದೆ. ಅಂದರೆ ಶೇಕಡವಾರು ಅಂಕಗಳನ್ನು ನಮೂದಿಸಿರುವುದಿಲ್ಲ. ಶೇಕಡವಾರು ಅಂಕಗಳು ನಮೂದಿಸದೆ ಇದ್ದಲ್ಲಿ ಅರ್ಹತೆಯನ್ನು ಪರಿಗಣಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ತಾವು ಪಡೆದಿರುವ ಗ್ರೇಡ್‌ನ್ನು ಶೇಕಡವಾರು ಅಂಕಗಳಿಗೆ ಪರಿವರ್ತಿಸಿ ತಮ್ಮ ಸಂಸ್ಥೆಗಳಿಂದ ಶೇಕಡವಾರು ಅಂಕಗಳ ಮಾಹಿತಿ / ಪ್ರಮಾಣ ಪತ್ರವನ್ನು ಪಡೆದು ತಪ್ಪದೆ ಅಪ್‌ಲೋಡ್ ಮಾಡುವುದು.**

**5. ಅರ್ಜಿ ಪಡೆಯುವ ವಿಧಾನ**?.

ಉ: ಅರ್ಜಿಯನ್ನು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ http:\\www.ksp.gov.in\\ ನಲ್ಲಿ ಪಡೆಯಬಹುದು. ಅರ್ಜಿಯನ್ನು ಆನ್‌ಲೈನ್ ಮುಖಾಂತರ ಮಾತ್ರ ಸಲ್ಲಿಸಲು ಅವಕಾಶ ನೀಡಲಾಗಿ ರುತ್ತದೆ. ಇನ್ನಾವುದೇ ರೀತಿಯಲ್ಲಿ ಅರ್ಜಿಯನ್ನು ಸಲ್ಲಿಸಿದ್ದಲ್ಲಿ ಪರಿಗಣಿಸಲಾಗುವುದಿಲ್ಲ.

**6. ಅಭ್ಯರ್ಥಿಯು ಎಷ್ಟು ಹುದ್ದೆ/ವಿಭಾಗಗಳಿಗೆ ಅರ್ಜಿ ಸಲ್ಲಿಸಬಹುದು**?.

ಉ: ಅಭ್ಯರ್ಥಿಯು ಒಂದೇ ಅರ್ಜಿಯಲ್ಲಿ ಒಂದು ಹುದ್ದೆಗೆ ಮಾತ್ರ ಅರ್ಜಿ ಸಲ್ಲಿಸಬಹುದು.

7. **ಆದ್ಯತೆ/ಪ್ರಾಮುಖ್ಯತೆ ಎಂದರೇನು**?.

ಉ: ಅನ್ವಯಿಸುವುದಿಲ್ಲ.

೮. **ಗ್ರಾಮೀಣ ಮೀಸಲಾತಿ, ಅಂಗವಿಕಲ, ಮಾಜಿ ಸೈನಿಕ ಮೀಸಲಾತಿ, ಯೋಜನಾ ನಿರಾಶ್ರಿತ ಮತ್ತು ಕನ್ನಡ ಮಾಧ್ಯಮ ಅಭ್ಯರ್ಥಿ ಪ್ರಮಾಣ ಪತ್ರ**?.

ಉ: ಅಭ್ಯರ್ಥಿಯು ಗ್ರಾಮೀಣ ಮೀಸಲಾತಿ, ಅಂಗವಿಕಲ, ಮಾಜಿ ಸೈನಿಕ ಮೀಸಲಾತಿ, ಯೋಜನಾ

ನಿರಾಶ್ರಿತ ಮತ್ತು ಕನ್ನಡ ಮಾಧ್ಯಮ ಮೀಸಲಾತಿ ಹಾಗೂ ತೃತೀಯ ಲಿಂಗ (ರಕ್ಷಣಾ ಹಕ್ಕುಗಳ ಅಧಿನಿಯಮ) ಹೊಂದಿದ್ದಲ್ಲಿ ಅಧಿಸೂಚನೆಯಲ್ಲಿ ನೀಡಲಾಗಿರುವ ಸರ್ಕಾರದ ಅಧಿಸೂಚನೆ ಹಾಗೂ ಷರತ್ತುಗಳನ್ನು ನೋಡುವುದು.

9. **ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ಯಾವ ಜಾತಿ ಪ್ರಮಾಣ ಪತ್ರದ ಫಾರಂನ್ನು ಹಾಜರುಪಡಿಸಬೇಕು** ?

ಉ: ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಸಹಿ ಮತ್ತು ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರಗಳನ್ನು ಮಾಡಿಸಿ ಸಲ್ಲಿಸುವುದು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ : ನಮೂನೆ-ಡಿ

ಬಿ) ಪ್ರವರ್ಗ – 1 : ನಮೂನೆ-ಇ

ಸಿ) ಪ್ರವರ್ಗ- 2ಎ, 2ಬಿ, 3ಎ, 3ಬಿ : ನಮೂನೆ – ಎಫ್

ಇವುಗಳ ಪ್ರತಿಯನ್ನು ಮಾಹಿತಿ ಸೂಚಿಯಲ್ಲಿ ಮಾಹಿತಿಗಾಗಿ ಲಗತ್ತಿಸಿದೆ.

10. ನೇಮಕಾತಿಯಲ್ಲಿ ವಿವಿಧ ಜಾತಿ ಮತ್ತು ವರ್ಗಗಳಿಗೆ ಎಷ್ಟು ಮೀಸಲಾತಿಯನ್ನು ನೀಡಲಾಗುತ್ತದೆ ?

ಉ: ಸಾಮಾನ್ಯ ವರ್ಗ - 50%
ಪರಿಶಿಷ್ಟ ಜಾತಿ - 15%
ಪರಿಶಿಷ್ಟ ಪಂಗಡ - 03%
ಪ್ರವರ್ಗ- 1 - 04%
ಪ್ರವರ್ಗ- 2ಎ - 15%
ಪ್ರವರ್ಗ- 2ಬಿ - 04%
ಪ್ರವರ್ಗ- 3ಎ - 04%
ಪ್ರವರ್ಗ- 3ಬಿ - 05%

(ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/08/ಸೆಹಿಮ/95, ದಿನಾಂಕ: 20.06.1995 ರಲ್ಲಿರುವಂತೆ)

11. **ನಿರಾಕ್ಷೇಪಣ ಪತ್ರ ಎಂದರೇನು?**

ಉ: ಅಭ್ಯರ್ಥಿಯು ರಾಜ್ಯ ಸರ್ಕಾರ/ಕೇಂದ್ರ ಸರ್ಕಾರದ ಉದ್ಯೋಗಿಗಳಾಗಿದ್ದರೆ, ನಿರಾಕ್ಷೇಪಣ ಪತ್ರವನ್ನು ಆ ಸಂಸ್ಥೆಯ ಮುಖ್ಯಸ್ಥರಿಂದ (ಅರ್ಜಿಸಲ್ಲಿಸುವ ಕೊನೆಯ ದಿನಾಂಕಕ್ಕೆ ಮುಂಚೆ) ಪಡೆದು ಅರ್ಜಿ ಸಲ್ಲಿಸು ವುದು. ನಿರಾಕ್ಷೇಪಣ ಪತ್ರದ ಮಾದರಿಗಾಗಿ ಅಧಿಸೂಚನೆಯನ್ನು ನೋಡುವುದು.

12. **ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಮುನ್ನ ಸ್ಕ್ಯಾನ್ ಮಾಡಿಟ್ಟುಕೊಳ್ಳುವ ಪ್ರಮಾಣ ಪತ್ರಗಳು ಯಾವುವು** ?

ಉ: ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಶೈಕ್ಷಣಿಕ ಅಂಕಪಟ್ಟಿಗಳು, ಕೆಲಸ ಮಾಡಿದ ಅನುಭವದ ಪ್ರಮಾಣ ಪತ್ರ ಹಾಗೂ ಇತರೆ ಪ್ರಮಾಣ ಪತ್ರಗಳು (ಜಾತಿ ಪ್ರಮಾಣ ಪತ್ರ, ಕನ್ನಡ ಮಾಧ್ಯಮ, ಗ್ರಾಮೀಣ, ಯೋಜನಾ ನಿರಾಶ್ರಿತ, ಕಲ್ಯಾಣ- ಕರ್ನಾಟಕ, ಸೇನೆ ಬಿಡುಗಡೆ ಪ್ರಮಾಣ ಪತ್ರ ಹಾಗೂ ಇತ್ಯಾದಿ) (ಜೆಪಿಜಿ / ಜಿಫ್ ಫಾರ್ಮಾಟ್‌ನಲ್ಲಿ 2 ಎಂ.ಬಿ. ಒಳಗಿರಬೇಕು) ಭಾವಚಿತ್ರ ಮತ್ತು ಸಹಿ (ಜೆಪಿಜಿ / ಜಿಫ್ ಫಾರ್ಮಾಟ್‌ನಲ್ಲಿ 100 ಕೆ.ಬಿ. ಒಳಗಿರಬೇಕು).

**13. ಅಪ್‌ಲೋಡ್ ಎಂದರೇನು?.**

ಉ: ಅಭ್ಯರ್ಥಿಯು ಪ್ರಮಾಣ ಪತ್ರಗಳ ಸ್ಕ್ಯಾನ್ ಮಾಡಿದ ಪ್ರತಿಗಳನ್ನು ಅವುಗಳಿಗೆ ನಿಗಧಿಪಡಿಸಿದ ಕಲಂಗಳಲ್ಲಿ ಅಪ್‌ಲೋಡ್ ಮಾಡತಕ್ಕದ್ದು. ಅಭ್ಯರ್ಥಿಯು ಅರ್ಜಿಯ ಜೊತೆ ಸಲ್ಲಿಸಿದ ಅಸಲು ಪ್ರತಿಗಳನ್ನು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

**14. * ಸಂಕೇತದ ಅರ್ಥವೇನು?.**

ಉ: * ಸಂಕೇತ ಕಡ್ಡಾಯವಾಗಿ ಅಭ್ಯರ್ಥಿಯು ವಿವರಗಳನ್ನು ನೀಡಲೇಬೇಕು, ಇಲ್ಲವಾದಲ್ಲಿ ಅಭ್ಯರ್ಥಿಯ ಅರ್ಜಿಯನ್ನು ಪೂರ್ಣಗೊಳಿಸಲು ಸಾಧ್ಯವಾಗುವುದಿಲ್ಲ.

**15. ಅರ್ಜಿ ಶುಲ್ಕ ಪಾವತಿಸುವ ವಿಧಾನ?.**

ಉ: ಒಂದೇ ಅರ್ಜಿಯಲ್ಲಿ ಒಂದು ಅಥವಾ ಹೆಚ್ಚು ಹುದ್ದೆಗೆ ಅರ್ಜಿ ಸಲ್ಲಿಸಿ ಶುಲ್ಕವನ್ನು ಪಾವತಿಸುವುದು. (ಹೆಚ್ಚಿನ ಮಾಹಿತಿಗಾಗಿ ಅಧಿಸೂಚನೆಯನ್ನು ನೋಡುವುದು).

**16. ಶುಲ್ಕ ಪಾವತಿಸಿದ ಮಾಹಿತಿಯ ವಿವರ ತಿಳಿಯುವುದು ಹೇಗೆ?.**

ಉ: ಅಭ್ಯರ್ಥಿಯು ತಾನು ಸಲ್ಲಿಸಿದ ಅರ್ಜಿಯನ್ನು ಪುನಃ ನನ್ನ ಅರ್ಜಿಯ ಮೇಲೆ ಕ್ಲಿಕ್ ಮಾಡಿ, ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನೀಡಿದ ನಂತರ ಶುಲ್ಕ ಪಾವತಿಸಿದ ವಿವರಗಳನ್ನು (ಜರ್ನಲ್ ಸಂಖ್ಯೆ, ಬ್ಯಾಂಕ್ ಕೋಡ್, ಶುಲ್ಕ ಮತ್ತು ಶುಲ್ಕ ಪವಾತಿಸಿದ ದಿನಾಂಕ) ಮೈ ಅಪ್ಲಿಕೇಷನಲ್ಲಿ ಬಿತ್ತರಿಸಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.

**17. ಗ್ರಾಮೀಣ ಅಭ್ಯರ್ಥಿ ಎಂದರೇನು ?**

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಗ್ರಾಮೀಣ ಅಭ್ಯರ್ಥಿ ಎನ್ನುತ್ತಾರೆ.

**18. ಕನ್ನಡ ಮಾಧ್ಯಮ ಅಭ್ಯರ್ಥಿ ಎಂದರೇನು ?**

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಕನ್ನಡ ಮಾಧ್ಯಮ ಅಭ್ಯರ್ಥಿ ಎನ್ನುತ್ತಾರೆ.

**19. ಮಾಜಿ ಸೈನಿಕ ಅಭ್ಯರ್ಥಿ ಎಂದರೇನು ?**

ಉ: ಭೂದಳ, ವಾಯು ದಳ, ನೌಕಾ ದಳದಲ್ಲಿ ಸೇವೆ ಸಲ್ಲಿಸಿ ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿರುವ ಯೋಧರನ್ನು ಮಾಜಿ ಸೈನಿಕ ಅಭ್ಯರ್ಥಿ ಎನ್ನುತ್ತಾರೆ.

**20. ಯೋಜನಾ ನಿರಾಶ್ರಿತ ಅಭ್ಯರ್ಥಿ ಎಂದರೇನು ?**

ಉ: ಸರ್ಕಾರದ ಯೋಜನೆಗಳಿಂದ ತಾವು ಅವಲಂಬಿತರಾಗಿದ್ದ ಕೃಷಿ ಭೂಮಿ, ಮನೆಗಳನ್ನು ಕಳೆದುಕೊಂಡ ಅಭ್ಯರ್ಥಿಗಳನ್ನು ಯೋಜನಾ ನಿರಾಶ್ರಿತ ಅಭ್ಯರ್ಥಿ ಎನ್ನುತ್ತಾರೆ.

**21. ಗ್ರಾಮೀಣ ಅಭ್ಯರ್ಥಿಗಳಿಗೆ ಶೇಕಡ ಮೀಸಲಾತಿ ಎಷ್ಟು ನೀಡಲಾಗಿದೆ ?**

ಉ: ಗ್ರಾಮೀಣ ಅಭ್ಯರ್ಥಿಗಳಿಗೆ 25% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

**22. ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಶೇಕಡ ಮೀಸಲಾತಿ ಎಷು ನೀಡಲಾಗಿದೆ ?**

ಉ: ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ

**23. ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ ಶೇಕಡ ಮೀಸಲಾತಿ ಎಷ್ಟು ನೀಡಲಾಗಿದೆ ?**

ಉ: ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

**24. ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಶೇಕಡ ಮೀಸಲಾತಿ ಎಷ್ಟು ನೀಡಲಾಗಿದೆ ?**

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ 10% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ /53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

**25. ಮಾಜಿ ಸೈನಿಕ ಅಭ್ಯರ್ಥಿಗಳು ಯಾವ ಪ್ರಮಾಣಪತ್ರಗಳನ್ನು ಸಲ್ಲಿಸಬೇಕಾಗುತ್ತದೆ ?**

ಉ: ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಪ್ರಮಾಣ ಪತ್ರದ ಜೊತೆಗೆ ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ / ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಜಾತಿ ಮೀಸಲಾತಿ ಕೋರಿದ್ದಲ್ಲಿ ಜಾತಿ ಪ್ರಮಾಣ ಪತ್ರ ಸಲ್ಲಿಸಬೇಕಾಗುತ್ತದೆ.

**26. ಪರೀಕ್ಷಾ ಶುಲ್ಕವನ್ನು ಯಾವ ವಿಧಾನದಲ್ಲಿ ಪಾವತಿಸಬೇಕು ?**

ಉ: ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿ ಹೆಚ್.ಡಿ.ಎಫ್.ಸಿ ( ಬ್ಯಾಂಕ್ ) ಅಥವಾ ಅಂಚೆಕಛೇರಿಯಲ್ಲಿ ಅಥವಾ ಆನ್‌ಲೈನ್‌ನಲ್ಲಿ ಪಾವತಿಸತಕ್ಕದ್ದು. ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

**27. ಇಲಾಖೆಯು ನಡೆಸುವ ಪರೀಕ್ಷೆಗಳಿಗೆ ಹಾಜರಾದಲ್ಲಿ ಪರೀಕ್ಷಾ ಭತ್ಯೆ ನೀಡಲಾಗುತ್ತದೆಯೇ ?**

ಉ: ಇಲ್ಲ. ಇಲಾಖೆಯು ನಡೆಸುವ ದಾಖಲಾತಿ ಪರೀಕ್ಷೆಯ ಸಂದರ್ಭದಲ್ಲಿ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ.

**28. ಮೂಲ ದಾಖಲಾತಿ ಎಂದರೇನು ?**

ಉ: ಮೂಲ ದಾಖಲಾತಿ ಎಂದರೆ ಯಾವ ಹುದ್ದೆಗೆ ಸೇರಲು ಬಯಸುತ್ತಾರೋ ಆ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ, ಹುಟ್ಟಿದ ದಿನಾಂಕದ ಅಂಕಪಟ್ಟಿ ಹಾಗೂ ಮೀಸಲಾತಿಗಳನ್ನು ಕೋರಿದ್ದಲ್ಲಿ ಅಂತಹ ಪ್ರಮಾಣ ಪತ್ರ ಮತ್ತು ಕಲ್ಯಾಣ- ಕರ್ನಾಟಕ ಪ್ರಮಾಣಪತ್ರ ಹಾಗೂ ರೀಸರ್ಚ್ ಅನುಭವದ ಪ್ರಮಾಣ ಪತ್ರದ ಮೂಲ ಪತ್ರಗಳು.

**29. ಮೂಲ ದಾಖಲಾತಿಗಳನ್ನು ಯಾವಾಗ ಹಾಜರುಪಡಿಸಬೇಕು ?**

ಉ: ನೇಮಕಾತಿ ಪ್ರಾಧಿಕಾರವು ಯಾವ ಹಂತದಲ್ಲಿಯಾದರೂ ಹಾಜರುಪಡಿಸಲು ಸೂಚಿಸಬಹುದು. ಅಭ್ಯರ್ಥಿಯು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ 15.01.2022 ರೊಳಗೆ ಸಿಂಧುವಾಗಿರುವಂತೆ ಮೂಲ ದಾಖಲಾತಿಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಹಾಜರುಪಡಿಸಲು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

**೩೦. ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ವೆಬ್-ಸೈಟ್ ಯಾವುದು ?**

ಉ: ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಹಾಗೂ ಮಾಹಿತಿಯನ್ನು ತಿಳಿದುಕೊಳ್ಳಲು http://ksp.gov.in (CLICK on Current Recruitment- 2021) ನ್ನು ನೋಡುವುದು.

**31. ಸ್ಥಳ ಪರಿಶೀಲನಾ ಅಧಿಕಾರಿಗಳ ಹುದ್ದೆಗೆ ವೇತನ ಶ್ರೇಣಿ ಎಷ್ಟು ?**

ಉ:

ಎ) **ಖಾಯಂಪೂರ್ವ ಅವಧಿ:** ಎರಡು ವರ್ಷ

ಬಿ) **ವೇತನ ಶ್ರೇಣಿ:** ₹. 37900-950-39800-1100-46400-1250-53900-1450-65600-1650-70850

ಸಿ) **ಪಿಂಚಣಿ ಸೌಲಭ್ಯ:** ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ: 31.03.2006 ರಂತೆ. ನೂತನ ಅಂಶದಾಯಿ ಪಿಂಚಣಿ ಸೌಲಭ್ಯ ಅನ್ವಯವಾಗುವುದು.

**32. ಲಿಖಿತ ಪರೀಕ್ಷೆ ಇದೆಯೇ ಮತ್ತು ಆಯ್ಕೆಯ ವಿಧಾನ ?**

ಉ: ಸ್ಥಳ ಪರಿಶೀಲನಾ ಅಧಿಕಾರಿಗಳ ಹುದ್ದೆಗೆ ಲಿಖಿತ ಪರೀಕ್ಷೆಯು ಇದ್ದು

**ಲಿಖಿತ ಪರೀಕ್ಷೆ:** ಅರ್ಹ ಅಭ್ಯರ್ಥಿಗಳಿಗೆ 150 ಅಂಕಗಳಿಗೆ ವಸ್ತುನಿಷ್ಠ ಮಾದರಿಯ ಎರಡು ಪತ್ರಿಕೆಗಳನ್ನೊಳಗೊಂಡ ಸ್ಪರ್ಧಾತ್ಮಕ ಲಿಖಿತ ಪರೀಕ್ಷೆಯನ್ನು ನಡೆಸಲಾಗುವುದು.

ಎ) **ಪತ್ರಿಕೆ-1: ಸಾಮಾನ್ಯ ಪತ್ರಿಕೆ-** ಸಾಮಾನ್ಯ ಅಧ್ಯಯನ ಹಾಗೂ ವಿಜ್ಞಾನಕ್ಕೆ ಸಂಬಂಧಿಸಿದ ಎಲ್ಲಾ ವಿಷಯಾಧಾರಿತ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ-75 ಅಂಕಗಳು [ಸಮಯ: 01 ಗಂಟೆ 30 ನಿಮಿಷಗಳು]

ಬಿ) **ಪತ್ರಿಕೆ-2: ನಿರ್ದಿಷ್ಠ ಪತ್ರಿಕೆ-** ವಿಷಯಾಧಾರಿತ ಪ್ರಶ್ನೆ ಪತ್ರಿಕೆಯಾಗಿದ್ದು, ವಿಧಿ ವಿಜ್ಞಾನ ವಿಷಯಕ್ಕೆ ಸಂಬಂಧಿಸಿದ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ-75 ಅಂಕಗಳು [ಸಮಯ: 01 ಗಂಟೆ 30 ನಿಮಿಷಗಳು]

ಸಿ) ಯಾವುದೇ ರೀತಿಯ ಋಣಾತ್ಮಕ ಅಂಕಗಳು ಇರುವುದಿಲ್ಲ.

**ಪಠ್ಯಕ್ರಮ:** ಹುದ್ದೆಗೆ ನಿಗದಿಪಡಿಸಲಾಗಿರುವ ವಿದ್ಯಾರ್ಹತೆಯನುಸಾರ ಪಠ್ಯಕ್ರಮವನ್ನು (Syllabus) ತಯಾರಿಸಿ, ಇಲಾಖೆಯ ಅಧಿಕೃತ ವೆಬ್‌ಸೈಟ್ https://recruitment.ksp.gov.in ನಲ್ಲಿ ಪ್ರಕಟಿಸಲಾಗುವುದು.

ಆಯ್ಕೆ ವಿಧಾನ:

ಎ) ಅಧಿಸೂಚನೆಯಲ್ಲಿ ನಮೂದಿಸಿದ ಖಾಲಿ ಹುದ್ದೆಗಳ ವರ್ಗೀಕರಣವು ಈಗಾಗಲೇ ಜಾರಿಯಲ್ಲಿರುವ ಸೇವಾ ನಿಯಮಾವಳಿಗಳು ಹಾಗೂ ಅಧಿಸೂಚನೆ ನಿಯಮಗಳನ್ನೊಳಗೊಂಡಿರುತ್ತದೆ ಹಾಗೂ ನ್ಯಾಯಾಲಯದ ತೀರ್ಪುಗಳ ಮತ್ತು ಸರ್ಕಾರದ ಅಧಿಸೂಚನೆಗಳ ಮೇರೆಗೆ ಬದಲಾವಣೆಗೆ ಒಳಪಟ್ಟಿರುತ್ತದೆ.

ಬಿ) ಆಯ್ಕೆ ಸಮಿತಿಯು ಸ್ವೀಕರಿಸಲಾಗುವ ಅರ್ಜಿಗಳನ್ನು ಪರಿಶೀಲಿಸಿದ ನಂತರ ಅಭ್ಯರ್ಥಿಗಳು ನೀಡಲಾಗಿರುವ ವಿವರ ಮತ್ತು ಕೋರಲಾಗಿರುವ ಮೀಸಲಾತಿಗಳು ಸರಿಯಿದೆ ಎಂದು ಖಾತ್ರಿ ಪಡಿಸಿದ ಮೇಲೆ ಅಧಿಸೂಚನೆಯಲ್ಲಿ ಪ್ರಕಟಿಸಿದಂತೆ ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಮತ್ತು ಹಾಲಿ ಚಾಲ್ತಿಯಲ್ಲಿರುವ ನಿಯಮ ಆದೇಶಗಳನ್ವಯ, ಮೀಸಲಾತಿಗಳನುಸಾರ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಇಬ್ಬರು ಅಥವಾ ಹೆಚ್ಚು ಅಭ್ಯರ್ಥಿಗಳು ಗಳಿಸಿದ ಅಂಕಗಳು ಒಂದೇ ಆಗಿದ್ದಲ್ಲಿ ಅಂತಹ ಸಂದರ್ಭದಲ್ಲಿ ವಯಸ್ಸಿನ ಆಧಾರದ ಮೇಲೆ ಅಂದರೆ ವಯಸ್ಸಿನಲ್ಲಿ ಹಿರಿಯರಾದವರು ಕಿರಿಯರಿಗಿಂತ ಶ್ರೇಣಿಯಲ್ಲಿ ಮೇಲಿರುತ್ತಾರೆ.

ಸಿ) ತೃತೀಯ ಲಿಂಗದ ಅಭ್ಯರ್ಥಿಗಳಿಗಾಗಿ ಮೀಸಲಿರಿಸಿದ ಹುದ್ದೆಗಳಿಗೆ ಸೂಕ್ತ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತಸ್ಥಾನಗಳನ್ನು ಅದೇ ಪ್ರವರ್ಗಕ್ಕೆ ಸೇರಿದ ಪುರುಷ ಅಥವಾ ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಡಿ) ಅಭ್ಯರ್ಥಿಗಳು ಎಲ್ಲಾ ವಿಧದಿಂದ ಅರ್ಹತೆ ಹೊಂದಿದ್ದಲ್ಲಿ ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು.

ಇ) ಹೊರ ರಾಜ್ಯದ ಅಭ್ಯರ್ಥಿಗಳು ಕರ್ನಾಟಕ ಸಿವಿಲ್ ಸೇವೆಗಳು (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳು, 1984ರ 2ನೇ ನಿಯಮದ ಪ್ರಕಾರ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಹೊರತು ನೇಮಕ ಹೊಂದಲು ಅರ್ಹರಾಗುವುದಿಲ್ಲ.

**೩೩. ಬೇರೆ ರಾಜ್ಯದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದೇ ? ಅವರಿಗೆ ಇರುವ ಷರತ್ತುಗಳೇನು ?**

ಉ: ಸಲ್ಲಿಸಬಹುದು. ಹೊರ ರಾಜ್ಯದ ಅಭ್ಯರ್ಥಿಗಳು ಕರ್ನಾಟಕ ಸಿವಿಲ್ ಸೇವೆಗಳು (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳು, ೧೯೮೪ರ ೨ನೇ ನಿಯಮದ ಪ್ರಕಾರ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಹೊರತು ನೇಮಕ ಹೊಂದಲು ಅರ್ಹರಾಗುವುದಿಲ್ಲ.

ವಿಶೇಷ ಸೂಚನೆ :-

ಈ ಎಲ್ಲಾ ಸಂಪೂರ್ಣ ಮಾಹಿತಿಗಾಗಿ ಕರ್ನಾಟಕ ರಾಜ್ಯಪತ್ರ ವಿಶೇಷ ಪತ್ರಿಕೆ ಅಧಿಸೂಚನೆ

ಸಂಖ್ಯೆ.16/ನೇಮಕಾತಿ-2/2021-22,

ಸಹಾಯವಾಣಿ ಸಂಖ್ಯೆ. : 080-22943346